ಆಯುಕ್ತರ ಕಛೇರಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ನಂ.16/ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು–52.
ದೂ:080–22374836,
ಇ–ಮೇಲ್:bcdbng@nic.in
bcwd.scholarship@karnataka.gov.in

ಸಂಖ್ಯೆ: ಹಿಂವಕಇ/ವಿವೇ/ಸಿಆರ್-16/2020-21

ದಿನಾಂಕ: 16.07.2021

ಗೆ,
ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ
ವರ್ಗಗಳ ಕಲ್ಯಾಣ ಅಧಿಕಾರಿಗಳು.

ಮಾನ್ಯರೆ,

ವಿಷಯ: 2020-21ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಮತ್ತು ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ. **(ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ).**

ಉಲ್ಲೇಖ: ಈ ಕಛೇರಿಯ ಸಮಸಂಖ್ಯೆ ದಿನಾಂಕ: 06.02.2021, ದಿನಾಂಕ: 03.03.2021, ದಿನಾಂಕ: 19.04.2021, ದಿನಾಂಕ: 29.04.2021, ದಿನಾಂಕ: 14.05.2021 ಹಾಗೂ ದಿನಾಂಕ: 29.05.2021.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2020-21ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಮತ್ತು ನರ್ಸಿಂಗ್ ವಿದ್ಯಾರ್ಥಿಗಳಿಗೆ ಶೀಷ್ಯ ವೇತನ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 20.06.2021ಕ್ಕೆ ನಿಗಧಿಪಡಿಸಲಾಗಿತ್ತು.

ಕೋವಿಡ್-19 ಸೊಂಕಿನ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಲಾಕ್‌ಡೌನ್ ಘೋಷಣೆಯಾದ ಕಾರಣ ಶಾಲಾ ಕಾಲೇಜುಗಳಿಗೆ ರಜೆಯನ್ನು ಘೋಷಿಸಿರುವುದರಿಂದ ವಿದ್ಯಾರ್ಥಿಗಳು ಇ-ಅಟೆಷ್ಟೆಷನ್ ಮಾಡಿಸುವುದು ಕಷ್ಟಸಾಧ್ಯವಾಗುತ್ತದೆ. ಆದ್ದರಿಂದ, ಈಗಾಗಲೇ ಎಸ್‌ಎಸ್‌ಪಿ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಪ್ರಾರಂಭಗೊಳಿಸಿದ್ದು ಅರ್ಜಿಯನ್ನು ಪೂರ್ಣಗೊಳಿಸದ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಹಿಸುವಂತೆ **(ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ)** ಕೊನೆಯ ದಿನಾಂಕವನ್ನು 25.07.2021ರವರೆಗೆ ವಿಸ್ತರಿಸಿದೆ. ಈ ಪತ್ರಕ್ಕೆ ಲಗತ್ತಿಸಿರುವ ಪ್ರಕಟಣೆಯನ್ನು ಜಿಲ್ಲಾ ಮಟ್ಟದ ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ 3 ದಿನಗಳ ಕಾಲ ಪ್ರಚುರ ಪಡಿಸುವಂತೆ ಹಾಗೂ ಎಲ್ಲಾ ಸರ್ಕಾರದ ಕಛೇರಿಗಳು ಮತ್ತು ಕಾಲೇಜುಗಳ ನಾಮಫಲಕಗಳಲ್ಲಿ ಪ್ರಕಟಿಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

ನಿಮ್ಮವಿಶ್ವಾಸಿ

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

ಕರ್ನಾಟಕಸರ್ಕಾರ

ಆಯುಕ್ತರ ಕಛೇರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ನಂ.16/ಡಿ, 3ನೇ ಮಹಡಿ, ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-52

ಸಂ:ಹಿಂವಕನಿ/ವಿವೇ/ಸಿಆರ್-16/2020-21 **ದಿನಾಂಕ:16.07.2021**

ಪ್ರಕಟಣೆ

ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2020-21 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಮತ್ತು "ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯವೇತನ" ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, 20.06.2021 ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದ್ದು, ಕೋವಿಡ್-19 ಸೊಂಕಿನ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಲಾಕ್‌ಡೌನ್ ಘೋಷಣೆಯಾದ ಕಾರಣ ಶಾಲಾ ಕಾಲೇಜುಗಳಿಗೆ ರಜೆಯನ್ನು ಘೋಷಿಸಿರುವುದರಿಂದ ವಿದ್ಯಾರ್ಥಿಗಳು ಇ-ಅಟೆಷ್ಟೇಷನ್ ಮಾಡಿಸುವುದು ಕಷ್ಟಸಾಧ್ಯವಾಗುತ್ತದೆ. ಆದ್ದರಿಂದ, ಈಗಾಗಲೇ ಎಸ್‌ಎಸ್‌ಪಿ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಪ್ರಾರಂಭಗೊಳಿಸಿದ್ದು ಅರ್ಜಿಯನ್ನು ಪೂರ್ಣಗೊಳಿಸದ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಹಿಸುವಂತೆ **(ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.)** ಕೊನೆಯ ದಿನಾಂಕವನ್ನು25.07.2021ರವರೆಗೆ ವಿಸ್ತರಿಸಲಾಗಿದೆ.

- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ :** **25.07.2021**
- **ಆನ್‌ಲೈನ್ ಮೂಲಕ ಅರ್ಜಿಸಲ್ಲಿಸ ಬೇಕಾದ ವೆಬ್ ಸೈಟ್ ವಿಳಾಸ :** www.ssp.postmatric.karnataka.gov.in
- **ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸ ಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್ ಸೈಟ್ ವಿಳಾಸ** www.bcwd.karnataka.gov.in/
- **ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ :** 8050770005/ 8050770004
  ಇಮೇಲ್: bcwd.scholarship@karnataka.gov.in
- **ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್:** postmatrichelp@karnataka.gov.in
  ದೂರವಾಣಿ ಸಂಖ್ಯೆ: 080-35254757

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

Note: Extension of last date for applying OBC Scholarship, interested student can act within due date.